**KARNATAK UNIVERSITY, DHARWAD**

EXAMINATION SECTION, K.U.DHARWAD

Registrar (Evaluation) 0836-2215375

Ref: No.KU/Exam/RVCell/2023/ 06 Date: 25/01/2024

## ಸುತ್ತೋಲೆ

ವಿಷಯ:- Feb/March 2023 ರ ಎಲ್.ಎಲ್.ಬಿ. ೩ ವರ್ಷದ ಹಾಗೂ ೫ ವರ್ಷದ ೧ ಮತ್ತು ೩ ನೇ ಸೆಮಿಸ್ಟರ್‌ನ ಪರೀಕ್ಷಾ ಫಲಿತಾಂಶದ ಉತ್ತರ ಪತ್ರಿಕೆಗಳ ಅಂಕಗಳ ಮರು ಎಣಿಕೆ/ಛಾಯಾ ಪ್ರತಿ/ಮರು ಮೌಲ್ಯಮಾಪನಕ್ಕೆ ಅರ್ಜಿಸಲ್ಲಿಸುವ ಕುರಿತು.

ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಟ್ಟ ಅಧೀನ ಮಹಾವಿದ್ಯಾಲಯದ ಪ್ರಾಚಾರ್ಯರ ಗಮನಕ್ಕೆ ತರಬಯಸುವುದೇನೆಂದರೆ ಎಲ್.ಎಲ್.ಬಿ. ೩ ವರ್ಷದ ಹಾಗೂ ೫ ವರ್ಷದ ೧ ಮತ್ತು ೩ ನೇ ಸೆಮಿಸ್ಟರ್‌ಗಳ ಪರೀಕ್ಷಾ ಫಲಿತಾಂಶ ವನ್ನು ಈಗಾಗಲೇ ಪ್ರಕಟಿಸಲಾಗಿರುತ್ತದೆ ಇದಕ್ಕೆ ಸಂಬಂಧಿಸಿದಂತೆ, ಮರು ಮೌಲ್ಯಮಾಪನ/ಅಂಕಗಳ ಮರು ಎಣಿಕೆ/ಛಾಯಾ ಪ್ರತಿ ಮುಂತಾದ ಕಾರ್ಯಗಳನ್ನು ತ್ವರಿತಗತಿಯಲ್ಲಿ ಕೈಗೊಳ್ಳಲು ವಿದ್ಯಾರ್ಥಿಗಳು ತಮ್ಮ ಮಹಾವಿದ್ಯಾಲಯ/ ವಿಭಾಗದ ಮುಖಾಂತರ ದಿನಾಂಕ: **-27-01-2024** ರಿಂದ **31-01-2024** ರ ವರೆಗೆ ಯು.ಯು.ಸಿ.ಎಂ.ಎಸ್ ಪೋರ್ಟಲ್‌ನಲ್ಲಿ ನೊಂದಾಯಿಸದೇ ಸಂಬಂಧಿಸಿದ ಶುಲ್ಕವನ್ನು ಭರಿಸಿ ಅರ್ಜಿಗಳನ್ನು ಮ್ಯಾನುವಲ್ ಸಲ್ಲಿಸಲು ತಿಳಿಸಲಾಗಿದೆ.

**೧. ಶುಲ್ಕದ ವಿವರ:**

| | | |
|---|---|---|
| i. | ಕಾನೂನು ವಿದ್ಯಾರ್ಥಿಗಳಿಗೆ ಮರುಮೌಲ್ಯಮಾಪನಕ್ಕೆ ಪ್ರತಿ ಉತ್ತರ ಪತ್ರಿಕೆಗೆ (ಕಾನೂನು ಪದವಿ) | ರೂ. 775=00 |
| ii. | ಅಂಕಗಳ ಮರು ಎಣಿಕೆಗಾಗಿ ಪ್ರತಿ ಉತ್ತರ ಪತ್ರಿಕೆಗೆ | ರೂ. 230=00 |
| iii. | ಉತ್ತರ ಪತ್ರಿಕೆಯ ಛಾಯಾ ಪ್ರತಿಯ ಪ್ರತಿ ಉತ್ತರ ಪತ್ರಿಕೆಗೆ | ರೂ. 2=00 ಪ್ರತಿ ಪುಟಕ್ಕೆ & |
| | | ರೂ. 60=00 ಅಂಚೆಯ ವೆಚ್ಚ |

**೨. ಇನ್ನಿತರ ವಿವರಗಳು:**

೧. ಮರು ಮೌಲ್ಯಮಾಪನಕ್ಕಾಗಿ ಸಲ್ಲಿಸುವ ಅರ್ಜಿಗಳ ಜೊತೆಗೆ ಶುಲ್ಕ ಭರಿಸಿದ ಚಲನ್ ಹಾಗೂ ಅಂತರ್‌ಜಾಲದಲ್ಲಿ ದೊರೆಯುವ ವಿದ್ಯಾರ್ಥಿಗಳ ಫಲಿತಾಂಶದ ಅಂಕಗಳ ಪಟ್ಟಿಯೊಂದಿಗೆ ಸಲ್ಲಿಸುವುದು. ( ಮೂಲ ಅಂಕಪಟ್ಟಿಯ ಅವಶ್ಯವಿರುವುದಿಲ್ಲ).

೨. ಗರಿಷ್ಠ ೨ ವಿಷಯಗಳಿಗೆ (ಉತ್ತರ ಪತ್ರಿಕೆಗಳಿಗೆ) ಮರು ಮೌಲ್ಯಮಾಪನ ಅರ್ಜಿ ಸಲ್ಲಿಸಬಹುದು. ಆದರೆ ಪ್ರಾಯೋಗಿಕ ಪರೀಕ್ಷೆ, ಪ್ರೌಢಪ್ರಬಂಧ (Dissertation), ಓ.ಎಂ.ಆರ್ ಮೂಲದ ಉತ್ತರ ಪತ್ರಿಕೆ, ಆಂತರಿಕ ವಿಷಯಗಳ ಮರುಮೌಲ್ಯಮಾಪನಕ್ಕೆ ಅವಕಾಶವಿರುವುದಿಲ್ಲ.

೩. ವಿದ್ಯಾರ್ಥಿಗಳು ಉತ್ತರ ಪತ್ರಿಕೆಗಳ ಮರು ಮೌಲ್ಯಮಾಪನ, ಅಂಕಗಳ ಮರು ಎಣಿಕೆ/ಛಾಯಾ ಪ್ರತಿಗಳಿಗೆ ಈ ಮೇಲಿನಂತೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

**೪. ಸದರ ಮಾಹಿತಿಯನ್ನು ತಮ್ಮ ಮಹಾವಿದ್ಯಾಲಯ/ವಿಭಾಗಗಳ ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರಲು ಸೂಚಿಸಲಾಗಿದೆ.**

ವಿ.ಸೂ: ಕೊನೆಯ ದಿನಾಂಕ ಮುಗಿದ ಎರಡು ದಿನಗಳೊಳಗಾಗಿ ಎಲ್ಲ ವಿದ್ಯಾರ್ಥಿಗಳಿಂದ **ಮ್ಯಾನುವಲ್ ಅರ್ಜಿಗಳು ಹಾಗೂ ಶುಲ್ಕ ಭರಿಸಿಕೊಂಡು** ವಿವರವಾದ ಮಾಹಿತಿಯನ್ನು ಪಡೆದು ಕ್ರೂಢಿಕರಿಸಿ ಅಧೀಕ್ಷಕರು, ಮರು ಮೌಲ್ಯಮಾಪನ ವಿಭಾಗ, ಕೋಣೆ ಸಂಖ್ಯೆ: ೨೦೩ ಪರೀಕ್ಷಾ ವಿಭಾಗ ಕ.ವಿ.ವಿ. ಧಾರವಾಡ ಇವರಿಗೆ ನೀಡುವುದು.

**ಕುಲಸಚಿವರು (ಮೌಲ್ಯಮಾಪನ)**

ಗೆ,

೧. ಸಂಬಂಧಪಟ್ಟ ಎಲ್ಲ ಮಹಾವಿದ್ಯಾಲಯಗಳ ಪ್ರಾಚಾರ್ಯರು/ವಿಭಾಗದ ಮುಖ್ಯಸ್ಥರು/ಕೋ-ಆರ್ಡಿನೇಟರುಗಳು

೨. ಆಪ್ತ ಕಾರ್ಯದರ್ಶಿಗಳು, ಕುಲಪತಿಗಳ ಕಚೇರಿ/ಕುಲಸಚಿವರ ಕಚೇರಿ/ವಿತ್ತಾಧಿಕಾರಿಗಳ ಕಚೇರಿ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.

೩. ಸಹಾಯಕ ಕುಲಸಚಿವರು, ಉಪಕುಲಸಚಿವರು, ಪರೀಕ್ಷಾ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.

೪. ಕುಲಸಚಿವರು (ಮೌಲ್ಯಮಾಪನ) ಇವರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.

೫. ಉಪಕುಲಸಚಿವರು, ವಿದ್ಯಾಮಂಡಳ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.

೬. ನಿರ್ದೇಶಕರು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕ.ವಿ.ವಿ.ಧಾರವಾಡ. ಇವರಿಗೆ ಅಂತರ್‌ಜಾಲದ ಮುಖಪುಟದಲ್ಲಿ ಪ್ರಕಟಣೆಗಾಗಿ.

೭. ಅಧೀಕ್ಷಕರು, ಸಾಮಾನ್ಯ ಆಡಳಿತ (ಪರೀಕ್ಷಾ) ವಿಭಾಗ, ಕ.ವಿ.ವಿ.ಧಾರವಾಡ ಇವರ ಮಾಹಿತಿಗಾಗಿ ಹಾಗೂ ಸಂಬಂಧಪಟ್ಟ ಮಹಾವಿದ್ಯಾಲಯದ ಪ್ರಾಚಾರ್ಯರುಗಳಿಗೆ ಇ-ಮೇಲ್ ಮುಖಾಂತರ ಕಳುಹಿಸುವ ಕ್ರಮಕ್ಕಾಗಿ.

೮. ಸಿಸ್ಟಮ್ ಎನಾಲಿಸ್ಟ್ ಗಣಕಯಂತ್ರ ವಿಭಾಗ, ಕ.ವಿ.ವಿ.ಧಾರವಾಡ ಇವರ ಮಾಹಿತಿಗಾಗಿ ಹಾಗೂ ಸುತ್ತೋಲೆಯನ್ನು UUCMS Portal ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.